**ಅಧ್ಯಕ್ಷರು, ಭೂಮಾಪನ ಇಲಾಖೆ, ನೇರ ನೇಮಕಾತಿ ಸಮಿತಿ ಹಾಗೂ ಆಯುಕ್ತರು, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು.**

**ಅಧಿಸೂಚನೆ**

**ಸಂಖ್ಯೆ:SSLR/15020-1/2020.** ದಿನಾಂಕ **01.02.2020.**

1. ಭಾರತ ಸಂವಿಧಾನದ ಅನುಚ್ಛೇದ 371(ಜೆ)ನ್ನು ಅನುಷ್ಠಾನಗೊಳಿಸುವ ಸಲುವಾಗಿ ಹೊರಡಿಸಿರುವ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ಮೀಸಲಾತಿ) ಆದೇಶ 2013 ರನ್ವಯ ರಚಿಸಿರುವ ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ಮೀಸಲಾತಿ) (ಸ್ಥಳೀಯ ವೃಂದಗಳ ರಚನೆ; ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆ) ನಿಯಮಗಳು 2013 ರಂತೆ ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ:ಕಂಇ 149 ಭೂದಾಸ 2013 ದಿನಾಂಕ: 25.09.2014 ಹಾಗೂ ಭೂಮಾಪನ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿರುವ ಹುದ್ದೆಗಳ ಪೈಕಿ ನೇರ ನೇಮಕಾತಿಯಿಂದ ಭರ್ತಿ ಮಾಡಬೇಕಾದ 105 ಭೂಮಾಪಕರ ಹುದ್ದೆಗಳಿಗೆ ಈ ಕಛೇರಿಯ ಅಧಿಸೂಚನೆ ಸಂಖ್ಯೆ: SSLR/EST/REC/REC-003/2015-16 ದಿನಾಂಕ: 27.07.2015 ಮತ್ತು 14.12.2015 ರಂತೆ ಅರ್ಜಿ ಆಹ್ವಾನಿಸಿ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಯಿತು. ಸದರಿ ನೇಮಕಾತಿ ಪ್ರಕ್ರಿಯೆಯಲ್ಲಿ ಪರಿಶಿಷ್ಟ ಜಾತಿಗೆ ಸೇರಿದ ಅಂಗವಿಕಲ ಅಭ್ಯರ್ಥಿಗಳು ಲಭ್ಯವಿಲ್ಲದ ಕಾರಣ ಮೀಸಲಿರಿಸಲಾದ 01 ಹುದ್ದೆಯನ್ನು ಬ್ಯಾಕ್‌ಲಾಗ್ ಹುದ್ದೆಯೆಂದು ಪರಿಗಣಿಸಲಾಗಿದೆ. ಸದರಿ **01 ಬ್ಯಾಕ್ ಲಾಗ್ ಹುದ್ದೆಯನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ** (ಹೈದರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ) ಅರ್ಜಿಯನ್ನು ಆನ್ ಲೈನ್ **(Online)** ಮುಖಾಂತರ ಅಹ್ವಾನಿಸಲಾಗಿದೆ.

| **ಹುದ್ದೆ** | **ವೇತನ ಶ್ರೇಣಿ** |
|---|---|
| ಭೂಮಾಪಕರು | ವೇತನ ಶ್ರೇಣಿ ರೂ.23500-550-24600-600-27000-650-29600-750-32600-850-36000-950-39800-1100-46400-1250-47650 |

ಈ ಹುದ್ದೆಗೆ ಸ್ಪರ್ಧಾತ್ಮಕ ಪರೀಕ್ಷೆಯನ್ನು ಆನ್ ಲೈನ್ ಮೂಲಕ ಕಲ್ಬುರ್ಗಿ ಕೇಂದ್ರದಲ್ಲಿ ಮಾರ್ಚ್ 2020 ರ ಮಾಹೆಯಲ್ಲಿ ನಡೆಸಲು ಉದ್ದೇಶಿಸಿದೆ. ಪರೀಕ್ಷೆಯ ಖಚಿತ ದಿನಾಂಕವನ್ನು ಇಲಾಖಾ ವೆಬ್ ಸೈಟ್ ವಿಳಾಸವಾದ https://www.landrecords.karnataka.gov.in/surveyorrecruitment/ ರಲ್ಲಿ ಮತ್ತು ದಿನಪತ್ರಿಕೆಗಳಲ್ಲಿ 15 ದಿನ ಮುಂಚಿತವಾಗಿ ಪ್ರಚುರಪಡಿಸಲಾಗುವುದು. ಹುದ್ದೆಗೆ ನಿಗದಿಪಡಿಸಲಾದ ಅರ್ಜಿಗಳನ್ನು ಸಹ ವೆಬ್ ಸೈಟಿನಲ್ಲಿಯೇ ನೀಡಲಾಗಿದೆ. ಅರ್ಜಿಗಳನ್ನು ಅರ್ಜಿಗಳನ್ನು ಆನ್ ಲೈನ್ (Online) ಮುಖಾಂತರ ಸಲ್ಲಿಸತಕ್ಕದ್ದು. ಒಬ್ಬ ಅಭ್ಯರ್ಥಿಯು ಆನ್ ಲೈನ್ ನಲ್ಲಿ ಒಂದು ಅರ್ಜಿಯನ್ನು ಸಲ್ಲಿಸುವುದಕ್ಕೆ ಮಾತ್ರ ಅವಕಾಶ ಕಲ್ಪಿಸಲಾಗಿರುತ್ತದೆ. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿಯನ್ನು ಸಲ್ಲಿಸತಕ್ಕದ್ದು. ಅಪೂರ್ಣವಾದ ಅಥವಾ ನಿಯಮಗಳನ್ನು ಪಾಲಿಸದ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ಇಲ್ಲದೆ ತಿರಸ್ಕರಿಸಲಾಗುವುದು.

**ಆನ್ ಲೈನ್ ಮೂಲಕ ಅರ್ಜಿಗಳನ್ನು at** https://www.landrecords.karnataka.gov.in/surveyorrecruitment/ **ನಲ್ಲಿ ದಿನಾಂಕ: 20.02.2020 ರ ಸಂಜೆ 5-00 ಗಂಟೆಯ ಒಳಗೆ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ.**

2. **ಶುಲ್ಕ:**

ಅಭ್ಯರ್ಥಿಗಳು ನಾಡ ಕಛೇರಿಯ ಅಟಲ್ ಜಿ ಜನಸ್ನೇಹಿ ಕೇಂದ್ರಗಳಲ್ಲಿ ತಮ್ಮ ಚುನಾವಣಾ ಗುರುತಿನ ಚೀಟಿ ಅಥವಾ ಆಧಾರ್ ಗುರುತಿನ ಚೀಟಿ ನೀಡಿ ರೂ 50/- ಶುಲ್ಕವನ್ನು ಪಾವತಿಸಿ, ವಿಶಿಷ್ಟ ಅರ್ಜಿ ಸಂಖ್ಯೆಯನ್ನು (Application ID) ಹೊಂದಿರುವ

